## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀಮತಿ ಪ್ರಮೀಳಾ ಡೇಸಾ, ಸದಸ್ಯರು, ಕಾವ್ರಾಡಿ ಗ್ರಾಮ ಪಂಚಾಯತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣ 43-ಎ ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಉಡುಪಿ ಜಿಲ್ಲೆ ರವರ ಪತ್ರ ಸಂಖ್ಯೆ:ಜಿಪಂಉ:ಕೌನ್ಸಿಲ್:ಸಿಆರ್:18826/2017-18, ದಿನಾಂಕ:01-08-2017ರ ಪ್ರಸ್ತಾವನೆ.
2. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ:11-09-2017ರ ಕಾರಣ ಕೇಳುವ ನೋಟೀಸು.
3. ಸರ್ಕಾರದ ಸಮಸಂಖ್ಯೆಯ ವಿಚಾರಣಾ ನೋಟೀಸ್, ದಿನಾಂಕ:23.12.2017.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಉಡುಪಿ ಜಿಲ್ಲೆ, ರವರ ಪ್ರಸ್ತಾವನೆಯಲ್ಲಿ ಈ ಕೆಳಕಂಡಂತೆ ತಿಳಿಸಿರುತ್ತಾರೆ.

ಶ್ರೀಮತಿ ಪ್ರಮೀಳಾ ಡೇಸಾ, ಸದಸ್ಯರು, ಕಾವ್ರಾಡಿ ಗ್ರಾಮ ಪಂಚಾಯತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ, ಇವರು ದಿನಾಂಕ:31.01.2017, 27.02.2017, 27.03.2017 ಮತ್ತು 28.04.2017 ರಂದು ನಡೆದ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗಳಿಗೆ, ಪಂಚಾಯತಿಯ ಅನುಮತಿ ಇಲ್ಲದೆ ನಿರಂತರವಾಗಿ ನಾಲ್ಕು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿದ್ದು, ಈ ಬಗ್ಗೆ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ಚರ್ಚಿಸಿ, ನಿರ್ಣಯವಾಗಿದ್ದು, ಪ್ರಕರಣ 43(ಎ)(1)(iii) ರನ್ವಯ ಕ್ರಮ ಕೈಗೊಳ್ಳಲು ಮೇಲೆ ಓದಲಾದ (1)ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಉಡುಪಿ ಜಿಲ್ಲೆ, ರವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಶ್ರೀಮತಿ ಪ್ರಮೀಳಾ ಡೇಸಾ, ಸದಸ್ಯರು, ಕಾವ್ರಾಡಿ ಗ್ರಾಮ ಪಂಚಾಯಿತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ, ಇವರು ದಿನಾಂಕ:31.01.2017, 27.02.2017, 27.03.2017 ಮತ್ತು 28.04.2017 ರಂದು ನಡೆದ ಕಾವ್ರಾಡಿ ಗ್ರಾಮ ಪಂಚಾಯಿತಿಯ ನಾಲ್ಕು ಸಾಮಾನ್ಯ ಸಭೆಗಳಿಗೆ ಪಂಚಾಯಿತಿಯ ಅನುಮತಿ ಇಲ್ಲದೆ ಗೈರು ಹಾಜರಾಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ, ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಶ್ರೀಮತಿ ಪ್ರಮೀಳಾ ಡೇಸಾ, ಸದಸ್ಯರು, ಕಾವ್ರಾಡಿ ಗ್ರಾಮ ಪಂಚಾಯತಿ, ಇವರಿಗೆ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸಿಗೆ ಶ್ರೀಮತಿ ಪ್ರಮೀಳಾ ಡೇಸಾ, ರವರು ತಮ್ಮ ಹೇಳಿಕೆಯನ್ನು ಸಲ್ಲಿಸಿರುವುದಿಲ್ಲ.

ಮೇಲೆ ಓದಲಾದ (3) ರನ್ವಯ ಶ್ರೀಮತಿ ಪ್ರಮೀಳಾ ಡೇಸಾ, ಸದಸ್ಯರು, ಕಾವ್ರಾಡಿ ಗ್ರಾಮ ಪಂಚಾಯತಿ ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ, ಇವರನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ವಿಚಾರಣೆ ಕರೆಯಲಾಗಿ ದಿನಾಂಕ 20-01-2018 ರಂದು ಜರುಗಿದ ವಿಚಾರಣೆಯಲ್ಲಿ ಅಧ್ಯಕ್ಷರು, ಕಾವ್ರಾಡಿ ಗ್ರಾಮ ಪಂಚಾಯಿತಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತಿ ಪರವಾಗಿ ಶ್ರೀ ಬಿ. ಕಿಶೋರ್ ಕುಮಾರ್, ರವರು ಹಾಜರಾಗಿರುತ್ತಾರೆ. ಆಪಾದಿತ ಸದಸ್ಯರು ಹಾಜರಾಗಿರುವುದಿಲ್ಲ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಉಡುಪಿ ಜಿಲ್ಲೆರವರ ಪ್ರಸ್ತಾವನೆ ಹಾಗೂ ಎಲ್ಲಾ ಕಡತ/ದಾಖಲೆಗಳನ್ನು ಪರಿಶೀಲಿಸಲಾಗಿದೆ. ಶ್ರೀಮತಿ ಪ್ರಮೀಳಾ ಡೇಸಾರವರು 4 ಸಾಮಾನ್ಯ ಸಭೆಗಳಿಗಿಂತಲೂ ಹೆಚ್ಚಿನ ಸಾಮಾನ್ಯ ಸಭೆಗಳಿಗೆ ಸತತವಾಗಿ ಗೈರುಹಾಜರಾಗಿರುವುದು ಸ್ಪಷ್ಟವಾಗಿರುತ್ತದೆ. ಆದರೆ, ದಿನಾಂಕ: 20-01-2018ರಂದು ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್ ಕುಂದಾಪುರರವರು ಸಲ್ಲಿಸಿರುವ ವರದಿಯಲ್ಲಿ ಶ್ರೀಮತಿ ಪ್ರಮೀಳಾ ಡೇಸಾರವರು ವಿದೇಶಕ್ಕೆ ಹೋಗುವ ಸಲುವಾಗಿ ಅವರು ಸ್ವಇಚ್ಛೆಯಿಂದ ದಿನಾಂಕ: 10-08-2017ರಂದು ತಮ್ಮ ಗ್ರಾಮ ಪಂಚಾಯಿತಿ ಸದಸ್ಯತ್ವಕ್ಕೆ ರಾಜೀನಾಮೆಯನ್ನು ಸಲ್ಲಿಸಿದ್ದು, ಕಾವ್ರಾಡಿ ಗ್ರಾಮ

ಪಂಚಾಯಿತಿಯ ಅಧ್ಯಕ್ಷರು ಸದರಿ ರಾಜೀನಾಮೆಯನ್ನು ಅಂಗೀಕರಿಸಿದ್ದು, ದಿನಾಂಕ:30-08-2017ರಂದು ಜರುಗಿದ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ಶ್ರೀಮತಿ ಪ್ರಮೀಳಾ ಡೇಸಾರವರು ಸಲ್ಲಿಸಿದ್ದ ರಾಜೀನಾಮೆ ಪತ್ರವನ್ನು ಮಂಡಿಸಿ ಅನುಮೋದನೆ ಪಡೆಯಲಾಗಿದೆ ಎಂದು ವರದಿ ನೀಡಿರುತ್ತಾರೆ. ಆದುದರಿಂದ ಶ್ರೀಮತಿ ಪ್ರಮೀಳಾ ಡೇಸಾರವರು ಈಗಾಗಲೇ ತಮ್ಮ ಸದಸ್ಯತ್ವಕ್ಕೆ ರಾಜೀನಾಮೆಯನ್ನು ಸಲ್ಲಿಸಿರುವ ಹಿನ್ನೆಲೆಯಲ್ಲಿ ಪ್ರಕರಣವನ್ನು ಮುಕ್ತಾಯಗೊಳಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 632 ಗ್ರಾಪಂಅ 2017**
**ಬೆಂಗಳೂರು, ದಿನಾಂಕ: 04-04-2018.**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಪ್ರಮೀಳಾ ಡೇಸಾ, ಸದಸ್ಯರು, ಕಾವ್ರಾಡಿ ಗ್ರಾಮ ಪಂಚಾಯತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ, ಇವರು ತಮ್ಮ ಗ್ರಾಮ ಪಂಚಾಯತಿ ಸದಸ್ಯತ್ವಕ್ಕೆ ಈಗಾಗಲೇ ರಾಜೀನಾಮೆಯನ್ನು ಸಲ್ಲಿಸಿರುವ ಹಿನ್ನೆಲೆಯಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣ 43-ಎ ರನ್ವಯ ಸಲ್ಲಿಸಿದ್ದ ಪ್ರಕರಣವನ್ನು ಮುಕ್ತಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

4/4/18

(ಮುಬಾರಕ್ ಅಹ್ಮದ್),
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಜಿಲ್ಲಾಧಿಕಾರಿಗಳು, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಉಡುಪಿ ಜಿಲ್ಲೆ.
3. ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ.
4. ಶ್ರೀಮತಿ ಪ್ರಮೀಳಾ ಡೇಸಾ, ಸದಸ್ಯರು, ಕಾವ್ರಾಡಿ ಗ್ರಾಮ ಪಂಚಾಯತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ.
5. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಾವ್ರಾಡಿ ಗ್ರಾಮ ಪಂಚಾಯತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ.
6. ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.